**FILE No. ENERGY/603/VSC/2021-EMC-ENERGY SECRETARIAT**

ಕರ್ನಾಟಕ ಸರ್ಕಾರ

ಸಂಖ್ಯೆ: ಎನರ್ಜಿ 603 ವಿಎಸ್‌ಸಿ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 06-09-2021

ಇವರಿಂದ:

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಇಂಧನ ಇಲಾಖೆ, ವಿಕಾಸ ಸೌಧ,
ಬೆಂಗಳೂರು.

ಇವರಿಗೆ:

ವ್ಯವಸ್ಥಾಪಕ ನಿರ್ದೇಶಕರು,
ಕೆಪಿಟಿಸಿಎಲ್/ಬೆಸ್ಕಾಂ/ಸೆಸ್ಕ್/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ/ಹುಗ್ರಾವಿಸಸಂ.

ಮಾನ್ಯರೆ,

ವಿಷಯ: ಶಾಲೆ ಮತ್ತು ಕಾಲೇಜುಗಳ ಮೇಲೆ ಹಾದು ಹೋಗಿರುವ ವಿದ್ಯುತ್ ಮಾರ್ಗಗಳನ್ನು ಸ್ಥಳಾಂತರಿಸುವ ಬಗ್ಗೆ

ಉಲ್ಲೇಖ: ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಟಿಪ್ಪಣಿ ಸಂಖ್ಯೆ: ಇಕ&ಸಸ/ಟಿ/31/2021, ದಿನಾಂಕ: 19-08-2021.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಟಿಪ್ಪಣಿಯ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ.

ಸ್ವಾತಂತ್ರ ದಿನಾಚರಣೆಯ ಧ್ವಜಾರೋಹಣ ಸಂದರ್ಭದಲ್ಲಿ ವಿದ್ಯುತ್ ತಂತಿ ತಗುಲಿ ವಿದ್ಯಾರ್ಥಿಯೊಬ್ಬರು ಮೃತಪಟ್ಟಿರುವುದು ವರದಿಯಾಗಿರುವ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲಾ-ಕಾಲೇಜುಗಳ ಮೇಲೆ ಹಾದು ಹೋಗಿರುವ ವಿದ್ಯುತ್ ಮಾರ್ಗಗಳನ್ನು ಸ್ಥಳಾಂತರಿಸಲು / ಎ.ಬಿ ಕೇಬಲ್ ಅಳವಡಿಸಲು ಸುತ್ತೋಲೆಯನ್ನು ಹೊರಡಿಸಿ, ಸದರಿ ಕಾರ್ಯವನ್ನು ಕಾಲಮಿತಿಯೊಳಗೆ ಕೈಗೊಳ್ಳುವಂತೆ ಮಾನ್ಯ ಸಚಿವರು ಉಲ್ಲೇಖಿತ ಟಿಪ್ಪಣಿಯಲ್ಲಿ ಸೂಚಿಸಿರುತ್ತಾರೆ.

ಮಾನ್ಯ ಸಚಿವರ ಸೂಚನೆಯಂತೆ, ತಮ್ಮ ವ್ಯಾಪ್ತಿಗೊಳಪಡುವ ಎಲ್ಲಾ ಶಾಲೆ ಮತ್ತು ಕಾಲೇಜುಗಳ ಸ್ಥಳ ಪರಿಶೀಲನೆ ನಡೆಸಿ, ಶಾಲಾ-ಕಾಲೇಜುಗಳ ಮೇಲೆ/ಆವರಣದಲ್ಲಿ ಹಾದು ಹೋಗಿರುವ ವಿದ್ಯುತ್ ಮಾರ್ಗಗಳನ್ನು ನಿಯಮಾನುಸಾರ ಸ್ಥಳಾಂತರಿಸಲು ಅಥವಾ ಎ.ಬಿ ಕೇಬಲ್ ಅಳವಡಿಸಲು ಕಾಲಮಿತಿಯನ್ನು ನಿಗದಿಗೊಳಿಸಿ, ಸುತ್ತೋಲೆಯನ್ನು ಹೊರಡಿಸುವಂತೆ ಹಾಗೂ ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ

N. mangalagowri

(ಎನ್. ಮಂಗಳಗೌರಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

B 06.09/2021